ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	960(1304)
ಸದಸ್ಯರ ಹೆಸರು	ಶ್ರೀ ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	15–03–2021
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) 1994–95ರ ನಂತರ ನಡೆಯುತ್ತಿರುವ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು; **ಆ)** ಅವುಗಳನ್ನು ಯಾವ ಕಾಲಮಿತಿಯೊಳಗೆ ಅನುದಾನಕ್ಕೆ ಒಳಪಡಿಸಲಾಗುವುದು?	1995–2000 ಹಾಗೂ 2001–2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ನಮ್ಮ ಅಧ್ಯಕ್ಷತೆಯಲ್ಲಿ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿಯವರಾದ ಶ್ರೀ ಬಸವರಾಜ ಎಸ್. ಹೊರಟ್ಟಿ ರವರ ಸಮ್ಮುಖದಲ್ಲಿ ಸಭೆಯನ್ನು ಏರ್ಪಡಿಸಿ. ಸದರಿ ಸಭೆಯಲ್ಲಿ 1995–2000 ಹಾಗೂ 2001–2005ರವರೆಗೆ ಶಾಶ್ವತ ಅನುದಾನರಹಿತವಾಗಿ ಪ್ರಾರಂಭವಾಗಿರುವ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಪ್ರತಿ 5 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳು ಎಷ್ಟು ಮತ್ತು ಸದರಿ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು/ಉಪನ್ಯಾಸಕರುಗಳು/ಬೋಧಕೇತರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಬ್ಲಾಕ್ ಅವಧಿಯ ಮಾಹಿತಿಯನ್ನು ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ.

ಇಪಿ 67 ಪಿಎಂಸಿ 2021

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.